# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com


ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩-೨೪ ದಿನಾಂಕ : ೨೦-೦೬-೨೦೨೩

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
.................................................ಬೆಂಗಳೂರು

<u>ಪ್ರಕಟಣೆಯ ಕೃಪೆಗಾಗಿ</u>

## ‘ಶ್ರೀಮತಿ ಟಿ. ಗಿರಿಜ ಸಾಹಿತ್ಯ ದತ್ತಿ ಪ್ರಶಸ್ತಿ’ಗೆ ದಾವಣಗೆರೆಯ ಶ್ರೀಮತಿ ಜಿ.ಎಸ್. ಸುಶೀಲಾದೇವಿ ಆರ್. ರಾವ್ ಹಾಗೂ ಮೈಸೂರಿನ ಶ್ರೀಮತಿ ಚಂಪಾವತಿ ಶಿವಣ್ಣ ಆಯ್ಕೆ

ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್ತಿನ ಪ್ರತಿಷ್ಠಿತ ದತ್ತಿ ಪ್ರಶಸ್ತಿಗಳಲ್ಲಿ ಒಂದಾಗಿರುವ **‘ಶ್ರೀಮತಿ ಟಿ. ಗಿರಿಜಾ ಸಾಹಿತ್ಯ ದತ್ತಿ ಪ್ರಶಸ್ತಿ’** ಪ್ರಕಟವಾಗಿದೆ. ೨೦೨೨ನೆಯ ಸಾಲಿನ **‘ಶ್ರೀಮತಿ ಟಿ. ಗಿರಿಜಾ ಸಾಹಿತ್ಯ ದತ್ತಿ ಪ್ರಶಸ್ತಿ’**ಗೆ ನಾಡಿನ ಹಿರಿಯ ಲೇಖಕಿಯರಾದ, ದಾವಣಗೆರೆಯ ಶ್ರೀಮತಿ ಜಿ.ಎಸ್. ಸುಶೀಲಾದೇವಿ ಆರ್. ರಾವ್ ಹಾಗೂ ೨೦೨೩ನೆಯ ಸಾಲಿನ ಪ್ರಶಸ್ತಿಗಾಗಿ ಮೈಸೂರಿನ ಶ್ರೀಮತಿ ಚಂಪಾವತಿ ಶಿವಣ್ಣ ಅವರು ಆಯ್ಕೆಯಾಗಿದ್ದಾರೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ **ಡಾ. ಮಹೇಶ ಜೋಶಿ** ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಶ್ರೀಮತಿ ಟಿ.ಎಸ್. ಶೈಲಜಾ ದಾವಣಗೆರೆ** ಅವರು ನಾಡಿನ ಲೇಖಕಿಯರಿಗಾಗಿ ಕನ್ನಡಿಗರ ಸಾರ್ವಭೌಮ ಸಂಸ್ಥೆಯಾಗಿರುವ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಸ್ಥಾಪಿಸಲಾಗಿರುವ **‘ಶ್ರೀಮತಿ ಟಿ. ಗಿರಿಜಾ ಸಾಹಿತ್ಯ ದತ್ತಿ ಪ್ರಶಸ್ತಿ’**ಯು ಕನ್ನಡ ಸಾರಸ್ವತ ಲೋಕದಲ್ಲಿ ಗಣನೀಯ ಸಾಧನೆ ಮಾಡಿರುವ ಮಹಿಳಾ ಸಾಹಿತಿಯೊಬ್ಬರಿಗೆ ಪ್ರತಿ ವರ್ಷ ಪ್ರದಾನ ಮಾಡುವ ಆಶಯವನ್ನು ಹೊಂದಿರುತ್ತದೆ. ಪ್ರಸ್ತುತ ಪ್ರಶಸ್ತಿಯು ೧೩,೦೦೦ (ಹದಿಮೂರು ಸಾವಿರ) ರೂ. ನಗದು, ಸ್ಮರಣಿಕೆ, ಫಲ ತಾಂಬೂಲಗಳನ್ನು ಒಳಗೊಂಡಿರುತ್ತದೆ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ತಿಳಿಸಿದ್ದಾರೆ.

ಇದುವರೆಗೂ ನಾಡಿನ ೮ ಜನ ಮಹಿಳಾ ಲೇಖಕಿಯರಿಗೆ ಪರಿಷತ್ತಿನ ಪ್ರತಿಷ್ಠಿತ **‘ಶ್ರೀಮತಿ ಟಿ. ಗಿರಿಜಾ ಸಾಹಿತ್ಯ ದತ್ತಿ ಪ್ರಶಸ್ತಿ’** ಪ್ರದಾನ ಮಾಡಲಾಗಿದೆ. ಈ ಬಾರಿಯ ಆಯ್ಕೆ ಸಮಿತಿಯು ೨೦೨೨ನೆಯ ಸಾಲಿನ **“ಶ್ರೀಮತಿ ಟಿ. ಗಿರಿಜಾ ಸಾಹಿತ್ಯ ದತ್ತಿ ಪ್ರಶಸ್ತಿ’** ಗಾಗಿ ಶ್ರೀಮತಿ ಜಿ.ಎಸ್. ಸುಶೀಲಾದೇವಿ ಆರ್. ರಾವ್ ಅವರನ್ನು ಅಯ್ಕೆ ಮಾಡಿದೆ. ಮೂಲತಃ ಚಿತ್ರದುರ್ಗ ಜಿಲ್ಲೆಯ ಗುಂಜಿಗನೂರಿನವರಾದ ಇವರು ಸದ್ಯ **ದಾವಣಗೆರೆಯಲ್ಲಿ ನೆಲೆಸಿದ್ದಾರೆ, ಕಥೆ, ಕಾದಂಬರಿ, ಮಕ್ಕಳ ಸಾಹಿತ್ಯ, ನಾಟಕ ಮೊದಲಾದ ಸಾಹಿತ್ಯ ಕ್ಷೇತ್ರಗಳಲ್ಲಿ ಸಾಕಷ್ಟು ಕೆಲಸಗಳನ್ನು ಮಾಡಿದ್ದಾರೆ.** ೨೦೨೩ನೆಯ **ಸಾಲಿನ ಪ್ರಶಸ್ತಿಗಾಗಿ ಆಯ್ಕೆಯಾಗಿರುವ ಶ್ರೀಮತಿ ಚಂಪಾವತಿ ಶಿವಣ್ಣ ಅವರು ಶಿವಮೊಗ್ಗ ಜಿಲ್ಲೆಯ ಸಾಗರ ತಾಲೂಕಿನ ಜೋಗದವರಾದ ಇವರು ಸದ್ಯ ಮೈಸೂರಿನಲ್ಲಿ ನೆಲೆನಿಂತಿದ್ದಾರೆ. ಕಥಾ ಸಂಕಲನಗಳು, ಕವನ ಸಂಕಲನಗಳು, ಹನಿಗವನ ಸಂಕಲನಗಳು, ವಚನ ಸಂಕಲನ, ಹನಿಗವನ ಸಂಕಲನಗಳು, ವಚನ ಸಂಕಲನ, ಅಭಿನಂದನಾ ಗ್ರಂಥಗಳನ್ನು ಕನ್ನಡ ಸಾಹಿತ್ಯ ಲೋಕಕ್ಕೆ ನೀಡಿರುತ್ತಾರೆ.**

**ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರ ಅಧ್ಯಕ್ಷತೆಯಲ್ಲಿ ನಡೆದ ಆಯ್ಕೆ ಸಮಿತಿಯಲ್ಲಿ ದತ್ತಿದಾನಿಗಳ ಪರವಾಗಿ ಶ್ರೀಮತಿ ಅರುಂಧತಿ ರಮೇಶ್, ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಶ್ರೀ ನೇ.ಭ. ರಾಮಲಿಂಗ ಶೆಟ್ಟಿ, ಡಾ. ಪದ್ಮಿನಿ ನಾಗರಾಜು ಹಾಗೂ ಗೌರವ ಕೋಶಾಧ್ಯಕ್ಷರಾದ ಡಾ. ಬಿ.ಎಂ. ಪಟೇಲ್ ಪಾಂಡು** ಅವರು ಉಪಸ್ಥಿತರಿದ್ದರು.

ಛಾಯಾಚಿತ್ರ- ಫೋಟೋ-೧- ಶ್ರೀಮತಿ ಜಿ.ಎಸ್. ಸುಶೀಲಾದೇವಿ ಆರ್.ರಾವ್
ಫೋಟೋ-೨- ಶ್ರೀಮತಿ ಚಂಪಾವತಿ ಶಿವಣ್ಣ

**ಶ್ರೀನಾಥ್ ಜೆ.**
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು
ಬೆಂಗಳೂರು